ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ನಿಧನ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 19/10/2019

# ಬಕಾಲ ಕವಿ ಕೆ.ಬಿ.ಸಿದ್ದಯ್ಯ ನಿಧನ

■ ವಿಶ್ವವಾಣಿ ಸುದ್ದಿಮನೆ ತುಮಕೂರು

ಸಾಹಿತಿ, ರಾಜಕಾರಣಿ, ಹೋರಾಟಗಾರ, ಚಿಂತಕ, ಉಪನ್ಯಾಸಕ, ದಲಿತ ಕವಿ ಕೆ.ಬಿ.ಸಿದ್ದಯ್ಯ ಶುಕ್ರವಾರ ನಿಧನರಾದರು.

ಇತ್ತೀಚೆಗೆ ತುಮಕೂರು ತಾಲೂಕಿನ ಕೆಂಕೆರೆ ಬಳಿ ನಡೆದ ಅಪಘಾತದಿಂದ ತೀವ್ರ ಅಸ್ವಸ್ಥರಾಗಿದ್ದ ಅವರನ್ನು ಬೆಂಗಳೂರಿನ ಮಣಿಪಾಲ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೆ ಅಕ್ಟೋಬರ್ 18ರಂದು ಬೆಳಗ್ಗೆ ಕೊನೆಯುಸಿರೆಳೆದಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮಾಗಡಿ ತಾಲೂಕಿನ ಕೆಂಕೆಯಲ್ಲಿ ಬೈಲಪ್ಪ ಮತ್ತು ಅಂತೂರಮ್ಮನವರ ಪುತ್ರರಾಗಿ 1954 ಮಾರ್ಚ್ 2 ರಂದು ಜನಿಸಿದ ಕೆ.ಬಿ.ಸಿದ್ದಯ್ಯ ಅಲ್ಲಿಂದ ತುಮಕೂರಿಗೆ ಬಂದು ನೆಲೆಸಿದ್ದರು. ಮೈಸೂರು ವಿಶ್ವವಿದ್ಯಾಲಯದಲ್ಲಿ ಇಂಗ್ಲಿಷ್ ಎಂ.ಎ. ಪದವಿ ಪಡೆದ ಅವರು ನಂತರ ಸಿದ್ದಾರ್ಥ ಶಿಕ್ಷಣ ಸಂಸ್ಥೆಯ ತುಮಕೂರಿನ ಪದವಿ ಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರಾಗಿ, ಪ್ರಾಂಶುಪಾಲರಾಗಿ ನಿವೃತ್ತಿ ಹೊಂದಿದ್ದರು. ಅಲ್ಲಿ ಕೆಲಸ ಮಾಡುತ್ತಿದ್ದ ಸಂದರ್ಭದಲ್ಲಿ ಕಾಂಗ್ರೆಸ್ ನಾಯಕ ಡಾ. ಜಿ.ಪರಮೇಶ್ವರ ಅವರು ಒಳಮೀಸಲಿನ ಪರ ಇಲ್ಲ ಎಂಬ ಕಾರಣಕ್ಕೆ ಚುನಾವಣೆಯಲ್ಲಿ ಪರಮೇಶ್ವರ ವಿರುದ್ಧ ಮತ ಚಲಾಯಿಸುವಂತೆ ಹೇಳಿಕೆ ನೀಡಿ ವಿವಾದ ಮೈಮೇಲೆಳೆದುಕೊಂಡಿದ್ದರು.


ಕೆಬಿ ಸಿದ್ದಯ್ಯ
1954-2019

ಸಾಹಿತಿ ಕೆ.ಬಿ.ಸಿದ್ದಯ್ಯ ತಮ್ಮ ಮನೆಗೆ ಉಡುಪಿಯ ಪೇಜಾವರ ಮಠದ ವಿಶ್ವೇಶ್ವರ ತೀರ್ಥ ಸ್ವಾಮೀಜಿಯನ್ನು ಕರೆಸಿಕೊಂಡು ಟೀಕೆಗೂ ಗುರಿಯಾಗಿದ್ದರು. ತುಮಕೂರಿನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ದೇವನೂರು ಮಹಾದೇವ ಅವರನ್ನು ತೀವ್ರ ಟೀಕೆಗೆ ಗುರಿಮಾಡಿದ್ದ ಕೆಬಿ ಸಂಘರ್ಷಕ್ಕೆ ಕಾರಣರಾಗಿದ್ದರು. ರಾಜ್ಯೋತ್ಸವ ಪ್ರಶಸ್ತಿ ಸಮಿತಿಯಲ್ಲಿ ಸದಸ್ಯರಾಗಿದ್ದ ಕೆಬಿ ಪಟ್ಟಿ ಬಿಡುಗಡೆಯಾಗುವ ಮೊದಲೇ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದರು. ಬಳಿಕ ಅವರಿಗೆ ರಾಜ್ಯೋತ್ಸವ ಪ್ರಶಸ್ತಿ ಬಂದಿತ್ತು. ಇದು ಕೂಡ ಟೀಕೆಗೆ ಅನುವು ಮಾಡಿಕೊಟ್ಟಿತ್ತು.

ದಕ್ಲಕಥಾದೇವಿ, ಬಕಾಲ, ಅನಾತ್ಮ ಗಲ್ಲೀಬಾನೆ ಈ ನಾಲ್ಕು ಖಂಡಕಾವ್ಯಗಳಾದರೆ, ಕತ್ತಲೊಳಗೆ ಮಾತುಕತೆ, ಬುದ್ಧನ ನಾಲ್ಕು ಸತ್ಯಗಳು ಗದ್ಯಬರಹಗಳು. ದಲಿತ ಚಳವಳಿಯೊಂದಿಗೆ ಮುನ್ನೆಲೆಗೆ ಬಂದಿದ್ದ ಕೆಬಿ ರಾಜ್ಯದ ಉದ್ದಕ್ಕೂ ಸಾಹಿತ್ಯ ವಲಯದಲ್ಲಿ ಪ್ರಭಾವ ಬೀರಿದ್ದರು. ಕಿರಿದರೊಳ್ ಪಿರಿದರ್ಥ ಎಂಬಂತೆ ಕಡಿಮೆ ಕೃತಿಗಳನ್ನು ಬರೆದರೂ ಅವೆಲ್ಲವೂ ಗಮನ ಸೆಳೆದವು.

ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಸಾಹಿತಿ ಡಾ.ಯು.ಆರ್.ಅನಂತಮೂರ್ತಿ ಶಿಷ್ಯರಾಗಿದ್ದ ಕೆ.ಬಿ.ಸಿದ್ದಯ್ಯ, ಜಿಲ್ಲಾಮಟ್ಟದ, ರಾಜ್ಯಮಟ್ಟದ ವಿಚಾರ ಸಂಕಿರಣಗಳಲ್ಲಿ ಭಾಗವಹಿಸಿದ್ದರು. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತರಾಗಿದ್ದರು.